## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ನಿಂಗೇಗೌಡ, ನಿವೃತ್ತ ಕಿರಿಯ ಇಂಜಿನಿಯರ್, ಹಾಸನ ಇವರ ಅಮಾನತ್ತು ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ, 1958ರ ನಿಯಮ 100(7)ರನ್ವಯ ಅಮಾನತ್ತಿನ ಅವಧಿಯೆಂದೇ ಪರಿಗಣಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 94 ವಿಸೇಬಿ 2010, ದಿನಾಂಕ:24.12.2011.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 94 ವಿಸೇಬಿ 2010, ದಿನಾಂಕ:19.04.2011.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 94 ವಿಸೇಬಿ 2010, ದಿನಾಂಕ:24.12.2020
4. ಶ್ರೀ ನಿಂಗೇಗೌಡ ಇವರ ಮನವಿ ದಿನಾಂಕ:25.10.2021.

*******

**ಪ್ರಸ್ತಾವನೆ:**

ಶ್ರೀ ನಿಂಗೇಗೌಡ, ನಿವೃತ್ತ ಕಿರಿಯ ಇಂಜಿನಿಯರಿಂಗ್ ಇವರು ಈ ಹಿಂದೆ ಹಾಸನ ಜಿಲ್ಲೆ ಅರಕಲಗೂಡು ತಾಲ್ಲೂಕು ಪಂಚಾಯತಿಯಲ್ಲಿ ಕಿರಿಯ ಇಂಜಿನಿಯರ್ ಆಗಿ ಕಾರ್ಯನಿರ್ವಹಿಸುತ್ತಿದ್ದ ಅವಧಿಯಲ್ಲಿ ಅರಕಲಗೂಡು ತಾಲ್ಲೂಕಿನಲ್ಲಿ 2009-10ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಅವ್ಯವಹಾರ ಮಾಡಿರುತ್ತಾರೆಂಬ ಆರೋಪದ ಮೇರೆಗೆ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸದರಿಯವರ ವಿರುದ್ಧದ ಶಿಸ್ತು ಕ್ರಮವನ್ನು ಬಾಕಿ ಇರಿಸಿ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಲಾಗಿತ್ತು.

ತದನಂತರ, ಶ್ರೀ ನಿಂಗೇಗೌಡ, ಇವರು ತಮ್ಮ ಅಮಾನತ್ತನ್ನು ತೆರವುಗೊಳಿಸಿ ಸ್ಥಳ ನಿಯುಕ್ತಿಗೊಳಿಸುವಂತೆ ಕೋರಿ ಸರ್ಕಾರಕ್ಕೆ ಸಲ್ಲಿಸಿದ್ದ ಮನವಿಯನ್ನು ಪರಿಶೀಲಿಸಿ, ಸದರಿಯವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿಂತೆ ಇಲಾಖಾ ವಿಚಾರಣೆ ಬಾಕಿ ಇರಿಸಿ, ಸದರಿಯವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಇವರ ಸೇವೆಯನ್ನು ಅವರ ಮಾತೃ ಇಲಾಖೆಯಾದ ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ) ಇವರ ವಶಕ್ಕೆ ನೀಡಿ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಸರ್ಕಾರದ ಆದೇಶವನ್ನು ಹೊರಡಿಸಲಾಗಿತ್ತು.

ಸರ್ಕಾರವು ಸದರಿ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ನಡೆಸಲು ನೇಮಿಸಲಾಗಿದ್ದ ವಿಚಾರಣಾಧಿಕಾರಿಯು ಪ್ರಕರಣದ ವಿವರವಾದ ಇಲಾಖಾ ವಿಚಾರಣೆಯನ್ನು ಕೈಗೊಂಡು, ಸರ್ಕಾರಕ್ಕೆ ಸಲ್ಲಿಸಿದ್ದ ವಿಚಾರಣಾ ವರದಿಯನ್ನು ಕೂಲಕಂಷವಾಗಿ ಪರಿಶೀಲಿಸಿ, ನಿಯಮಾನುಸಾರ ಆಪಾದಿತ ಅಧಿಕಾರಿ/ನೌಕರರಿಗೆ 2ನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಿ ಲಿಖಿತ ಹೇಳಿಕೆ ಪಡೆದು ಪರಿಶೀಲಿಸಿ, ಅವರ ವಿರುದ್ಧ ಆರೋಪಗಳನ್ನು ಕೈಬಿಡಲು ಯಾವುದೇ ಸಕಾರಣಗಳು ಪರಿಗಣಿಸಬಹುದಾಂತಹ ಯಾವುದೇ ಪೂರಕ ಅಂಶ/ದಾಖಲೆಗಳು ಕಂಡುಬಾರದೇ ಇದ್ದುದರಿಂದ ಸದರಿಯವ ವಿರುದ್ಧದ ಸಾಬೀತಾದ ಆರೋಪಗಳಿಗೆ ಅನುಗುಣವಾಗಿ ದಂಡನೆಯನ್ನು ವಿಧಿಸಿ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಂಡನಾ ಆದೇಶವನ್ನು ಹೊರಡಿಸಲಾಗಿರುತ್ತದೆ.

ಶ್ರೀ ನಿಂಗೇಗೌಡ, ಇವರು ಮೇಲೆ ಕ್ರಮ ಸಂಖ್ಯೆ (04)ರಲ್ಲಿ ಓದಲಾದ ಮನವಿಯನ್ನು ಸರ್ಕಾರಕ್ಕೆ ಸಲ್ಲಿಸಿ, ತಮ್ಮ ವಿರುದ್ಧದ ಇಲಾಖಾ ವಿಚಾರಣೆಯು ದಂಡನೆಯನ್ನು ವಿಧಿಸುವುದರೊಂದಿಗೆ ಮುಕ್ತಾಯವಾಗಿರುವುದರಿಂದ ತಾವು ಅಮಾನತ್ತಿನಲ್ಲಿದ್ದ ದಿ:07.09.2010 ರಿಂದ ದಿ:25.07.2011ರವರೆಗಿನ

...2

ಒಟ್ಟು 320 ದಿನಗಳ ಅವಧಿಗೆ ತಮ್ಮ ಹಕ್ಕಿನಲ್ಲಿರುವ ಪರಿವರ್ತಿತ ರಜೆ ಮತ್ತು ಗಳಿಕೆ ರಜೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

ಸರ್ಕಾರವು ಶ್ರೀ ನಿಂಗೇಗೌಡ, ನಿವೃತ್ತ ಕಿರಿಯ ಅಭಿಯಂತರರು ಇವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಸದರಿಯವರ ವಿರುದ್ಧದ ಇಲಾಖಾ ವಿಚಾರಣೆಯಲ್ಲಿ ಆರೋಪಗಳು ಸಾಬೀತಾದ ಹಿನ್ನಲೆಯಲ್ಲಿ ದಂಡನೆ ವಿಧಿಸಿ ಇಲಾಖಾ ವಿಚಾರಣೆ ಪ್ರಕರಣ ಮುಕ್ತಾಯಗೊಳಿಸಲಾಗಿರುತ್ತದೆ. ಈ ಪ್ರಕರಣದಲ್ಲಿ ಸದರಿ ಅಧಿಕಾರಿಯನ್ನು ಅಮಾನತ್ತಿನಲ್ಲಿ ಇರಿಸಲಾಗಿದ್ದ ಅವಧಿಯನ್ನು ಕರ್ತವ್ಯದ ಅವಧಿ ಎಂದು ಪರಿಗಣಿಸಿ ರಜೆ ಮಂಜೂರಿಸಲು ಯಾವುದೇ ಸಕಾರಣಗಳು ಇರುವುದಿಲ್ಲ. ಪ್ರಯುಕ್ತ ದಿನಾಂಕ: 07.09.2010 ರಿಂದ 25.07.2011 ರವರೆಗಿನ ಅಮಾನತ್ತಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ, 1958ರ ನಿಯಮ 100(7) ರನ್ವಯ ಅಮಾನತ್ತಿನ ಅವಧಿಯೆಂದೇ ಪರಿಗಣಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 24 ವಿಸೇಬಿ 2022,</u>**

**<u>ಬೆಂಗಳೂರು, ದಿನಾಂಕ: 06.05.2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ನಿಂಗೇಗೌಡ, ನಿವೃತ್ತ ಕಿರಿಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಅರಕಲಗೂಡು (ಪ್ರಸ್ತುತ ನಿವೃತ್ತ) ಇವರು **ದಿನಾಂಕ:07.09.2010 ರಿಂದ 25.07.2011** ರವರಗೆ ಅಮಾನತ್ತಿನಲ್ಲಿದ್ದ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ, 1958ರ ನಿಯಮ 100(7) ರನ್ವಯ **ಅಮಾನತ್ತಿನ ಅವಧಿಯೆಂದೇ** ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

06/05/2022
**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
06/05/22

**<u>ಇವರಿಗೆ:</u>**

1) ಪ್ರಧಾನ ಮಹಾಲೇಖಪಾಲರು( ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಹಾಸನ
3) ಆಪಾದಿತ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಹಾಸನ ಇವರ ಮುಖಾಂತರ).
4) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**<u>ಪ್ರತಿಯನ್ನು:</u>**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಉಪ ಕಾರ್ಯದರ್ಶಿ(ಆ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರುಗಳಿಗೆ.